## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **513 (595)**
ಸದಸ್ಯರ ಹೆಸರು: ಡಾ. ಉಮಾಶ್ರೀ (ನಾಮ ನಿರ್ದೇಶಿತರು)
ಉತ್ತರಿಸುವ ದಿನಾಂಕ: 09.03.2026
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ವಿವರ |
|---|---|---|
| ಅ) | ರಾಜ್ಯದಲ್ಲಿಸರ್ಕಾರಿ ಪ್ರಾಥಮಿಕ ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ನೇಮಕಕ್ಕೆ ಆರ್ಥಿಕ ಇಲಾಖೆ ಅನುಮೋದನೆ ನೀಡಿದ್ದರೂ, ಇನ್ನೂ ನೇಮಕಾತಿ ಪ್ರಕ್ರಿಯೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ನೇಮಕಾತಿ ಪ್ರಕ್ರಿಯೆ ಯಾವಾಗ ಪ್ರಾರಂಭ ಮಾಡಲಾಗುವುದು: | **ಪ್ರಾಥಮಿಕ ಶಿಕ್ಷಣ :-**<br>2024-25ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ "ಕಲ್ಯಾಣ ಕರ್ನಾಟಕ ಭಾಗದಲಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ 4882 ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಚಾಲನೆಯಲ್ಲಿದೆ ಶಾಲೆಗಳಲ್ಲಿ ಮಕ್ಕಳ ದಾಖಲಾತಿಗೆ ಅನುಗುಣವಾಗಿ ಶಿಕ್ಷಕರ ಹುದ್ದೆಗಳನ್ನು ತರ್ಕಬದ್ಧಗೊಳಿಸಿ ವರ್ಗಾವಣೆ ಮಾಡಲಾಗಿದೆ. ಜಿಲ್ಲಾವಾರು ಹುದ್ದೆಗಳನ್ನು ಗುರುತಿಸಿ ನೇಮಕ ಮಾಡಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>**ಪ್ರೌಢ ಶಿಕ್ಷಣ :-**<br><br>2025-26ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ "ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 5,267 ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಮುಂದುವರೆದು, ಇಲಾಖೆಯಲ್ಲಿ ಇನ್ನೂ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತರ್ಕಬದ್ಧಗೊಳಿಸಿ 5000 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು" ಎಂದು ಸನ್ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯ ಕಂಡಿಕೆ-119 ರಲ್ಲಿ ಘೋಷಿಸಿರುತ್ತಾರೆ.<br><br>ಅದರಂತೆ ದೈಹಿಕ ಶಿಕ್ಷಣ ಶಿಕ್ಷಕರು ಸೇರಿದಂತೆ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆಯು ಪರಿಶೀಲನಾ ಹಂತದಲ್ಲಿರುತ್ತದೆ. |

| | | |
|---|---|---|
| | | **ಪದವಿಪೂರ್ವ :-**<br><br>ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಯಲ್ಲಿ ಮಂಜೂರಾದ 20 ದೈಹಿಕ ಶಿಕ್ಷಣ ಉಪನ್ಯಾಸಕರ ವೃಂದ ಬಲದಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿಗಾಗಿ ಕೇಂದ್ರಿಕೃತ ದಾಖಲಾತಿ ಘಟಕದ ವತಿಯಿಂದ (CAC) ಆಯ್ಕೆ ಪ್ರಕ್ರಿಯೆ ನಡೆಸಲು ಸರ್ಕಾರವು ಅನುಮತಿ ನೀಡಲಾಗಿದ್ದು, ಅರ್ಹ ಅಭ್ಯರ್ಥಿಗಳ ಆಯ್ಕೆ ಮಾಡಿ ಪಟ್ಟಿಯು ಪರಿಶೀಲನಾ ಹಂತದಲ್ಲಿರುತ್ತದೆ. |
| ಆ) | ಶಾಲಾ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇಮಕಾತಿ ಅಥವಾ ಬಡ್ತಿ ಮೂಲಕ ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು? | **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ** ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. ಮುಂಬಡ್ತಿ ಕೋಟಾದಡಿಯಲ್ಲಿ ಖಾಲಿಯಿರುವ ಹುದ್ದೆಗಳಿಗೆ ಅರ್ಹತೆಯನುಸಾರ ಪರಿಶೀಲಿಸಿ ಬಡ್ತಿ ನೀಡಲು ಕಾಲ-ಕಾಲಕ್ಕೆ ಕ್ರಮವಹಿಸಲಾಗುತ್ತಿದೆ.<br><br>ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ಯಲ್ಲಿ ಮಂಜೂರಾದ 20 ದೈಹಿಕ ಶಿಕ್ಷಣ ಉಪನ್ಯಾಸಕರ ವೃಂದ ಬಲದಲ್ಲಿ ಬಡ್ತಿ ಕೋಟಾದಡಿ ಖಾಲಿ ಇದ್ದ 10 ಹುದ್ದೆಗಳನ್ನು ಶಾಲಾ ಶಿಕ್ಷಣ ಇಲಾಖೆಯ (ಸಾರ್ವಜನಿಕ ಶಿಕ್ಷಣ ಇಲಾಖೆ) ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರಿಗೆ ದಿನಾಂಕ: 06-12-2024ರಲ್ಲಿ ಅರ್ಹ ದೈಹಿಕ ಶಿಕ್ಷಣ ಶಿಕ್ಷಕರಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡಲಾಗಿದೆ.<br><br>ಬಡ್ತಿ ಮುಂದೂಡಿರುವ/ ನಿವೃತ್ತಿಯ ಪ್ರಯುಕ್ತ, ಸ್ಥಳಿಯ ವೃಂದದಲ್ಲಿ 1 ಹುದ್ದೆ ಹಾಗೂ ಉಳಿಕೆ ವೃಂದದಲ್ಲಿ 5 ಹುದ್ದೆಗಳು ಖಾಲಿ ಉಳಿದ್ದಿದ್ದು, ಒಟ್ಟು 6 ಖಾಲಿ ಹುದ್ದೆಗಳ ಬಡ್ತಿ ಪ್ರಕ್ರಿಯೆ ಪರಿಶೀಲನಾ ಹಂತದಲ್ಲಿರುತ್ತದೆ. |

ಸಂಖ್ಯೆ:ಇಪಿ 73 ಎಸ್‌ಇಎಸ್ 2026

(ಎಸ್. ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು